# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1513

ಸದಸ್ಯರ ಹೆಸರು : **ಶ್ರೀ. ಎಂ ಎಲ್ ಅನಿಲ್‌ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)**

ಉತ್ತರಿಸುವ ದಿನಾಂಕ : **17/03/2026**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ಕೋಲಾರ ನಗರಸಭೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು; (ಸಂಪೂರ್ಣವಾದ ಮಾಹಿತಿ ನೀಡುವುದು) | ಜಿಲ್ಲಾಧಿಕಾರಿ, ಕೋಲಾರ, ಜಿಲ್ಲೆ ರವರು ಸಲ್ಲಿಸಿದ್ದ ದಾಖಲೆಗಳನ್ನಾಧರಿಸಿ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಕೋಲಾರ ನಗರಸಭೆಯಿಂದ ಮಹಾನಗರ ಪಾಲಿಕೆಯನ್ನು ರಚಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಈ ಪ್ರಸ್ತಾವನೆಯನ್ನು ನಿಯಮಾನುಸಾರ ಪರಿಶೀಲಿಸಿ, ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿತ್ತು. ಸದರಿ ಪ್ರಸ್ತಾವನೆಯನ್ನು ಮುಂದೂಡುವಂತೆ ಆರ್ಥಿಕ ಇಲಾಖೆಯು ಅಭಿಪ್ರಾಯ ನೀಡಿದ್ದರಿಂದ, ಪ್ರಸ್ತಾವನೆಯನ್ನು ಪರಿಶೀಲನೆಯಿಂದ ಕೈಬಿಡಲಾಗಿರುತ್ತದೆ. |
| ಆ | ಕೋಲಾರ ತಾಲ್ಲೂಕಿನ ಗ್ರಾಮೀಣ ಸ್ವರೂಪ ಕಳೆದುಕೊಂಡಿರುವ ಗ್ರಾಮಗಳನ್ನು ಕೋಲಾರ ನಗರಸಭೆಗೆ ಸೇರಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ; | ಪ್ರಸ್ತುತ ರಾಷ್ಟ್ರಾದ್ಯಂತ ಜನಗಣತಿ ಕಾರ್ಯಗಳನ್ನು ಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ಹೊಸ ನಗರ ಸ್ಥಳೀಯ ಸಂಸ್ಥೆಗಳನ್ನು ರಚಿಸುವ, ವ್ಯಾಪ್ತಿಯನ್ನು ವಿಸ್ತರಿಸುವ ಕಾಲಾವಕಾಶವು ದಿನಾಂಕ:31/12/2025 ರಂದು ಮುಕ್ತಾಯಗೊಂಡಿದ್ದು, ಇಂತಹ ಪ್ರಸ್ತಾವನೆಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ; ಹೊಸ ನಗರ ಸ್ಥಳೀಯ ಸಂಸ್ಥೆಗಳನ್ನು ರಚಿಸಲು ಮುಂದಿನ ದಿನಗಳಲ್ಲಿ ಕಾಲಾವಕಾಶವನ್ನು ಕಲ್ಪಿಸಿದ ನಂತರ ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಲು ಅವಕಾಶವಾಗುತ್ತದೆ. |
| ಇ | ರಾಜ್ಯದಲ್ಲಿ ಅವಧಿ ಮುಕ್ತಾಯವಾಗಿರುವ ನಗರಸಭೆ/ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಚುನಾವಣೆಯನ್ನು ಯಾವ ಕಾಲಮಿತಿಯೊಳಗೆ ನಡೆಸಲಾಗುವುದು; | ರಾಜ್ಯದ ಅವಧಿ ಮುಕ್ತಾಯವಾಗಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ವಾರ್ಡುವಾರು ಮೀಸಲಾತಿ ನಿಗದಿಪಡಿಸಲು ಕ್ರಮವಹಿಸಲಾಗುತ್ತಿದ್ದು, ಈಗಾಗಲೇ 23 ನಗರ ನಗರ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದಿಂದ ಅಧಿಸೂಚನೆ ಹೊರಡಿಸಿ, ಆಕ್ಷೇಪಣೆಯನ್ನು ಆಹ್ವಾನಿಸಲಾಗಿರುತ್ತದೆ. ಅದರಂತೆ ಸದರಿ ಅಧಿಸೂಚನೆಗಳಿಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಪರಿಶೀಲಿಸಿ ವಾರ್ಡವಾರು ಮೀಸಲಾತಿ ಅಂತಿಮಗೊಳಿಸುವ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. ಜೊತೆಗೆ ರಾಜ್ಯದಲ್ಲಿ ಇನ್ನುಳಿದ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡುವಾರು ಮೀಸಲಾತಿಯನ್ನು ನಿಗದಿಪಡಿಸುವ ಪ್ರಕ್ರಿಯೆಯೂ ಚಾಲನೆಯಲ್ಲಿರುತ್ತದೆ. ನಗರ ಸ್ಥಳೀಯ ಸಂಸ್ಥೆಗಳಲ್ಲಿನ ವಾರ್ಡುವಾರು ಮೀಸಲಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣೆ ನಡೆಸಲು ಅವಕಾಶವಾಗುತ್ತದೆ. |

| | | |
|---|---|---|
| ಈ | ರಾಜ್ಯದ ನಗರಸಭೆ/ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಿಬ್ಬಂದಿ ಕೊರತೆ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ರಾಜ್ಯದ ನಗರಸಭೆ, ಪುರಸಭೆ & ಪಟ್ಟಣ ಪಂಚಾಯಿತಿ (ಮಹಾ ನಗರಪಾಲಿಕೆ ಹೊರತುಪಡಿಸಿ) ಗಳಿಗೆ ಒಟ್ಟು 36,134 ಹುದ್ದೆಗಳು ಮಂಜೂರಾಗಿದ್ದು, ಸದರಿ ಹುದ್ದೆಗಳಿಗೆದುರಾಗಿ 16,625 ಖಾಯಂ ನೌಕರರು ಕಾರ್ಯನಿರ್ವಹಿಸುತ್ತಿದ್ದು, 19,509 ಹುದ್ದೆಗಳು ಖಾಲಿ ಇರುತ್ತವೆ. ಅಲ್ಲದೇ ಗುತ್ತಿಗೆ, ಹೊರಗುತ್ತಿಗೆ, ನೇರಪಾವತಿ, ಸಮಾನ ಕೆಲಸಕ್ಕೆ ಸಮಾನ ವೇತನ ದಿನಗೂಲಿ ಆಧಾರದ ಮೇಲೆ ಒಟ್ಟು 12,777 ನೌಕರರು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಮತ್ತು ಖಾಯಂ ಅಲ್ಲದ ನೌಕರರೂ ಸೇರಿದಂತೆ ಒಟ್ಟು 29,402 ನೌಕರರು ಕಾರ್ಯನಿರ್ವಹಿಸುತ್ತಿರುವುದರಿಂದ ಸಮರ್ಪಕವಾಗಿ ಕಾರ್ಯನಿರ್ವಹಣೆಯಾಗುತ್ತಿದೆ.<br><br>ವಿವಿಧ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ 100 ರೋಸ್ಟರ್ ಬಿಂದುಗಳನ್ನು ಗುರುತಿಸಲು ಇರುವಂಥ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 1 ಸೇಹಿಮ 2022: ದಿನಾಂಕ:28/12/2022 ರ ಆದೇಶದ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿ ಆದೇಶ ಮತ್ತು ರೋಸ್ಟರ್ ಬಿಂದುಗಳಂತೆ ಖಾಲಿ ಇರುವ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ನೇಮಕಾತಿ ಪ್ರಾಧಿಕಾರಗಳಿಗೆ ತಿಳಿಸಲಾಗಿರುತ್ತದೆ (ಈ ವಿಷಯವಾಗಿ ದಾಖಲಾಗಿರುವ ರಿಟ್ ಪಿಟಿಷನ್ ಸಂಖ್ಯೆ:200448/2025 ರ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟು ಕ್ರಮವಹಿಸುವಂತೆ ತಿಳಿಸಲಾಗಿರುತ್ತದೆ).<br>ಅದರಂತೆ, ರಾಜ್ಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ ಮುಖ್ಯಾಧಿಕಾರಿ ಶ್ರೇಣಿ-1, ಕಿರಿಯ ಅಭಿಯಂತರರು, ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು ಮತ್ತು ಕಿರಿಯ ಆರೋಗ್ಯ ನಿರೀಕ್ಷಕರ ಹುದ್ದೆಗಳನ್ನು ಸಹ ಭರ್ತಿ ಮಾಡುವುದಕ್ಕಾಗಿ ಆರ್ಥಿಕ ಇಲಾಖೆ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಪೌರಾಡಳಿತ ನಿರ್ದೇಶನಾಲಯ/ನೇಮಕಾತಿ ಪ್ರಾಧಿಕಾರದ ಹಂತದಲ್ಲಿ ಕ್ರಮವಹಿಸಲಾಗುತ್ತದೆ.<br><br>ಇದಲ್ಲದೇ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ನೌಕರರ ಕೊರತೆಯಿದ್ದಲ್ಲಿ ಅಗತ್ಯತೆಗನುಗುಣವಾಗಿ ಸ್ವಚ್ಛತಾ ಸಿಬ್ಬಂದಿಯನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿ ಗುತ್ತಿಗೆ / ಹೊರಗುತ್ತಿಗೆಯಡಿ ನೇಮಕ ಮಾಡಿಕೊಳ್ಳಲು ಅವಕಾಶ ನೀಡಲಾಗಿದ್ದು ಅದರಂತೆಯೂ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ:ನಅಇ 17 ಎಲ್‌ಸಿಕ್ಯೂ 2026**

(ರಹೀಂ ಖಾನ್)

**ಪೌರಾಡಳಿತ ಹಾಗೂ ಹಜ್ ಸಚಿವರು**